ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ  ದಿನಾಂಕ : DATE : 17/02/2020

# ದೇಶದ್ರೋಹ ಕೇಸ್ ಸಮರ್ಥಿಸಿದ್ರೆ ಗೌರ್ನರ್‌ಗೆ ಕೈ ಅಡ್ಡಿ?

## ಅಧಿವೇಶನ ಹಿನ್ನೆಲೆ: ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಿರ್ಧಾರ | ಇಂದು ಮತ್ತೆ ಸಭೆ: ಹೋರಾಟದ ಬಗ್ಗೆ ಅಂತಿಮ ತೀರ್ಮಾನ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮಂಗಳೂರು ಗೋಲಿಬಾರ್ ಪ್ರಕರಣ, ದೇಶದ್ರೋಹದ ಪ್ರಕರಣದಂತಹ ವಿಚಾರದಲ್ಲಿ ರಾಜ್ಯ ಸರ್ಕಾರದ ಸಮರ್ಥನೆ ಹಾಗೂ ಪೌರತ್ವ ತಿದ್ದುಪಡಿ ಕಾಯ್ದೆಯಂತಹ ಕೇಂದ್ರ ಸರ್ಕಾರದ ನಿರ್ಧಾರದ ಪರ ನಿಲುವುಗಳು ವ್ಯಕ್ತವಾದರೆ ಸೋಮವಾರ ನಡೆಯುವ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣಕ್ಕೆ ಕಾಂಗ್ರೆಸ್ ಅಡ್ಡಿಪಡಿಸುವ ಸಾಧ್ಯತೆಯಿದೆ.



ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಅವರ ನಿವಾಸದಲ್ಲಿ ನಡೆದ ಕಾಂಗ್ರೆಸ್ ಹಿರಿಯರ ಸಭೆಯಲ್ಲಿ ಇಂತಹದೊಂದು ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಸಭೆಯ ನಂತರ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಕೆಲವೇ ನಿಮಿಷಗಳ ಸಭೆಯಲ್ಲಿ ಸರ್ಕಾರದ ವಿರುದ್ಧ ತೀವ್ರ ಪ್ರತಿರೋಧ ವ್ಯಕ್ತಪಡಿಸುವ ಸಂಬಂಧ ಚರ್ಚೆ ನಡೆಯಿತು. ಆದರೆ, ನಾಳೆ ಏನು ಎಂಬ ಗುಟ್ಟು ಬಿಟ್ಟುಕೊಡದ ಸಿದ್ದರಾಮಯ್ಯ ಸೋಮವಾರ ಬೆಳಗ್ಗೆ 10 ಗಂಟೆಗೆ ಮತ್ತೆ ವಿಧಾನಸೌಧದಲ್ಲಿ ಸಭೆ ಕರೆದಿದ್ದಾರೆ. ಈ ವೇಳೆ ಸದನದಲ್ಲಿ ಪಕ್ಷದ ಹೋರಾಟದ ಬಗ್ಗೆ ಅಂತಿಮ ಮಾಹಿತಿ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಭಾನುವಾರದ ಶಾಸಕಾಂಗ ಪಕ್ಷದ ಸಭೆಯಲ್ಲಿ ನಾಲ್ಕು ಸದನದಲ್ಲಿ ಪ್ರಸ್ತಾಪಿಸಬೇಕಿರುವ ಅಂಶಗಳ ಬಗ್ಗೆ ಪ್ರಾಥಮಿಕ ಮಾಹಿತಿ ನೀಡಿದ್ದಾರೆ. ಹಿರಿಯ ನಾಯಕರ ಸಭೆಯಲ್ಲಿ ಕೈಗೊಂಡ ನಿರ್ಧಾರವನ್ನ ಸ್ಥೂಲವಾಗಿ ಸಭೆಗೆ ತಿಳಿಸಿದ ಅವರು, ಮಂಗಳೂರು ಸಿಎಎ ಪ್ರತಿಭಟನೆಯಲ್ಲಿ ಗೋಲಿಬಾರ್ ನಡೆಸಿ ಇಬ್ಬರನ್ನು ಕೊಂದಿರುವುದು ಹಾಗೂ ಶಾಸಕ ಯು.ಟಿ. ಖಾದರ್ ಸೇರಿದಂತೆ ಅನಗತ್ಯವಾಗಿ ಅಮಾಯಕರ ಮೇಲೆ ದೇಶದ್ರೋಹ ಪ್ರಕರಣ ದಾಖಲಿಸಲಾಗುತ್ತಿದೆ. ಆದರೆ, ಮಹಾತ್ಮ ಗಾಂಧೀಜಿ ವಿರುದ್ಧ ಮಾತನಾಡಿದ ಅನಂತಕುಮಾರ್ ಹೆಗಡೆ, ಬಾಬರಿ ಮಸೀದಿ ಧ್ವಂಸ ಅಣಕು ಪ್ರದರ್ಶನ ಮಾಡಿಸಿದ ಕಲ್ಲಡ್ಕ ಪ್ರಭಾಕರ್ ಭಟ್, ದ್ವೇಷದ ಹೇಳಿಕೆ ನೀಡುತ್ತಿರುವ ಸಿ.ಟಿ. ರವಿ, ಎಂ.ಪಿ. ರೇಣುಕಾಚಾರ್ಯರಂತಹವರ ಮೇಲೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ.

ರಾಜ್ಯ ಸರ್ಕಾರವು ಪ್ರತಿ ಹಂತದಲ್ಲೂ ಜನರ ಸಮಸ್ಯೆಗಳಿಗೆ ಸ್ಪಂದಿಸಲು ವಿಫಲವಾಗಿದೆ. ಸರ್ಕಾರ ರಚನೆಯಾದ ಬಳಿಕ ಉಂಟಾದ ನೆರೆ ಪರಿಹಾರ ಕಾಮಗಾರಿಗಳಲ್ಲೂ ವಿಫಲವಾಗಿದೆ. ಕೇಂದ್ರದ ಆರ್ಥಿಕ ನೀತಿಗಳಿಂದಾಗಿ ರಾಜ್ಯ ಸಾವಿರಾರು ಕೋಟಿ ರು. ನಷ್ಟ ಅನುಭವಿಸುತ್ತಿದೆ. ಕಲಬುರ್ಗಿಯಿಂದ ಜವಳಿ ಪಾರ್ಕ್ ಹಿಂಪಡೆದಿದೆ. ಕೇಂದ್ರದಿಂದ ಅನುದಾನ ಹಂಚಿಕೆಯಲ್ಲಿ ತೀವ್ರ ತಾರತಮ್ಯ ಆಗುತ್ತಿದ್ದರೂ ರಾಜ್ಯ ಸರ್ಕಾರ ಸಂಪೂರ್ಣ ಶರಣಾಗಿಬಿಟ್ಟಿದೆ. ಅಲ್ಲದೆ, ರಾಜ್ಯ ಸರ್ಕಾರವೂ ಅನ್ನದಾಸೋಹದಂತಹ ಕಾರ್ಯಕ್ರಮಗಳನ್ನು ನಿಲ್ಲಿಸಲು ಮುಂದಾಗಿದೆ. ಇಂತಹ ವಿಚಾರ ಮುಂದಿಟ್ಟುಕೊಂಡು ಹೋರಾಟ ನಡೆಸಬೇಕು ಎಂದರು ಎನ್ನಲಾಗಿದೆ.

## ಸವದಿ ಗೆಲ್ಲಿಸಲು, ಕಲಾಪ ಯಶಸ್ವಿಗೆ ಬಿಜೆಪಿ ನಿರ್ಧಾರ

ಬೆಂಗಳೂರು: ವಿಧಾನಸಭೆಯಿಂದ ವಿಧಾನಪರಿಷತ್‌ನ ಒಂದು ಸ್ಥಾನಕ್ಕೆ ನಡೆಯುವ ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿರುವ ಉಪಮುಖ್ಯಮಂತ್ರಿ ಲಕ್ಷ್ಮಣ್ ಸವದಿ ಪರ ಮತ ಚಲಾಯಿಸಬೇಕು ಎಂದು ಪಕ್ಷದ ಸಚಿವರಿಗೆ ಹಾಗೂ ಶಾಸಕರಿಗೆ ಬಿಜೆಪಿ ಶಾಸಕಾಂಗ ಸಭೆಯಲ್ಲಿ ನಿರ್ದೇಶನ ನೀಡಲಾಗಿದೆ.



ನಗರದ ಖಾಸಗಿ ಹೋಟೆಲ್‌ನಲ್ಲಿ ಭಾನುವಾರ ರಾತ್ರಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ಪಕ್ಷದ ಶಾಸಕಾಂಗ ಸಭೆ ನಡೆಯಿತು. ಸಭೆಯು ಅರ್ಧಗಂಟೆಗಳ ಕಾಲ ಮಾತ್ರ ನಡೆದಿದ್ದು, ಸಭೆಯಲ್ಲಿ ಪಕ್ಷದ ಶಾಸಕರಿಗೆ ವಿಪ್ ಜಾರಿಮಾಡಲಾಯಿತು. ಸದನದಲ್ಲಿ ಎಲ್ಲರೂ ಒಗ್ಗಟ್ಟಾಗಿರಬೇಕು. ಯಾವುದೇ ಭಿನ್ನಾಭಿಪ್ರಾಯಕ್ಕೆ ಅವಕಾಶ ಮಾಡಿಕೊಡಬಾರದು. ಪ್ರತಿಪಕ್ಷಗಳ ಟೀಕಾಸ್ತ್ರಗಳಿಗೆ ಸರಿಯಾದ ಉತ್ತರ ನೀಡಬೇಕು. ಯಾವುದೇ ಸಚಿವರನ್ನು ಇಕ್ಕಟ್ಟಿಗೆ ಸಿಲುಕಿಸಲು ಬಿಡಬಾರದು. ಈ ಬಾರಿಯ ಬಜೆಟ್ ಅಧಿವೇಶನ ಕಠಿಣವಾಗಿರಲಿದ್ದು, ಎಲ್ಲರ ಸಹಕಾರ ಅಗತ್ಯ ಎಂದು ಶಾಸಕರಿಗೆ ತಿಳಿಸಲಾಯಿತು ಎಂದು ತಿಳಿದುಬಂದಿದೆ.

## ಕಲಾಪಕ್ಕೂ ಮೊದಲು ಜೆಡಿಎಸ್ ಶಾಸಕಾಂಗ ಸಭೆ

ಬೆಂಗಳೂರು: ರಾಜ್ಯ ವಿಧಾನಮಂಡಲದ ಅಧಿವೇಶನವು ಸೋಮವಾರದಿಂದ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಸದನದಲ್ಲಿ ಹೋರಾಟ ನಡೆಸುವ ಕುರಿತು ಚರ್ಚಿಸಲು ಸೋಮವಾರ ಬೆಳಗ್ಗೆ ವಿಧಾನಸೌಧದಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ಉಭಯ ಸದನಗಳ ಸದಸ್ಯರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಈ ವರ್ಷದ ಮೊದಲ ಅಧಿವೇಶನ ಪ್ರಾರಂಭವಾಗಲಿದ್ದು, ಸೋಮವಾರ ರಾಜ್ಯಪಾಲರು ಜಂಟಿ ಅಧಿವೇಶನವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಸದನದಲ್ಲಿ ಜನಪರ ಹೋರಾಟದ ನಡೆಸುವ ಬಗ್ಗೆ ಚರ್ಚೆ ನಡೆಯಲಿದೆ. ಬೆಳಗ್ಗೆ 11 ರಾಜ್ಯಪಾಲರು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲಿದ್ದು, ಅದಕ್ಕೂ ಮುನ್ನ ಸಭೆ ನಡೆಸಲಾಗುತ್ತದೆ. ಮಂಗಳೂರಿನಲ್ಲಿ ನಡೆದ ಗಲಭೆ, ಗೋಲಿಬಾರ್ ಪ್ರಕರಣ, ರೈತರ ಸಾಲಮನ್ನಾ ವಿಚಾರಗಳನ್ನು ಎತ್ತಿ ಸರ್ಕಾರವನ್ನು ಸಂಕಷ್ಟಕ್ಕೆ ಸಿಲುಕಿಸುವ ಕುರಿತು ನಿರ್ಣಯ ಕೈಗೊಳ್ಳುವ ಸಾಧ್ಯತೆಯಿದೆ.

